ಧಾರವಾಡದಲ್ಲಿರುವ ಪೂರ್ಣ ಪ್ರಮಾಣದ ಸರಕಾರಿ ಮಹಾವಿದ್ಯಾಲಯಗಳು

963 - ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಧಾರವಾಡದಲ್ಲಿರುವ ಪೂರ್ಣ ಪ್ರಮಾಣದ ಸರಕಾರಿ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು? ಹಾಗೂ ಖಾಸಗಿ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು?*

ಆ) *ಧಾರವಾಡ ನಗರದಲ್ಲಿ ಒಂದು ಪೂರ್ಣ ಪ್ರಮಾಣದ ಸರಕಾರಿ ಮಹಾವಿದ್ಯಾಲಯ ಮತ್ತೊಂದು ನವನಗರದಲ್ಲಿ ಅವಶ್ಯಕವಾಗಿದೆ ಎಂಬುದು ಸರಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ಈ ಬಗ್ಗೆ ಸರಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?*

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಧಾರವಾಡ ಜಿಲ್ಲೆಯಲ್ಲಿ 02 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು 16 ಅನುದಾನಿತ ಪದವಿ ಕಾಲೇಜುಗಳು, 22 ಅನುದಾನ ರಹಿತ ಪದವಿ ಕಾಲೇಜುಗಳು, 01 ಅನುದಾನಿತ ಕಾನೂನು ಕಾಲೇಜುಗಳು ಹಾಗೂ 03 ಅನುದಾನ ರಹಿತ ಕಾನೂನು ಕಾಲೇಜುಗಳು.

ಆ) ಧಾರವಾಡ ನಗರದಲ್ಲಿ ಕಾಲೇಜು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಧಾರವಾಡದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳು

964 - ಶ್ರೀ ಬೆಲ್ಲದ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಧಾರವಾಡದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು?*

ಆ) *ಧಾರವಾಡದಲ್ಲಿ ಹೆಚ್ಚಿನ ಪ್ರೌಢಶಾಲೆಗಳನ್ನು ಪ್ರಾರಂಭಿಸುವ ಉದ್ದೇಶ ಸರಕಾರಕ್ಕಿದೆಯೇ?*

ಇ) *ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು?*

ಈ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 02.

ಆ) ಇಲ್ಲ.

ಇ) ಮತ್ತು ಈ) ಉದ್ಭವಿಸುವುದಿಲ್ಲ.